# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಜಲಾನಯನ, ಶಿಕ್ಷಣ, ಸಮಾಜ ಕಲ್ಯಾಣ ಮತ್ತು ತೋಟಗಾರಿಕೆ ಇಲಾಖೆಗಳಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ಬಾಕಿ ವೇತನ ವೆಚ್ಚಕ್ಕಾಗಿ ಹಾಗೂ ದಿನಗೂಲಿ ನೌಕರರ ವೇತನಕ್ಕಾಗಿ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆಗಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**<u>ಓದಲಾಗಿದೆ:</u>**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ/ಮುಖ್ಯ ಲೆಕ್ಕಾಧಿಕಾರಿ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

<u>ಪ್ರಸ್ತಾವನೆ:</u>

ರಾಜ್ಯದ ವಿವಿಧ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಜಲಾನಯನ, ಶಿಕ್ಷಣ, ಸಮಾಜ ಕಲ್ಯಾಣ ಮತ್ತು ತೋಟಗಾರಿಕೆ ಇಲಾಖೆಗಳಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ, ದಿನಗೂಲಿ/ಹೊರಗುತ್ತಿಗೆ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರುಗಳ ಬಾಕಿ ವೇತನ/ಪ್ರಸಕ್ತ ಸಾಲಿನ ವೇತನವನ್ನು ಸೆಳೆಯಲು ಹಾಗೂ ತೆರವಾದ ಹುದ್ದೆಗೆದುರಾಗಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರುಗಳ ಸಂಭಾವನೆಗಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2210, 2225, 2401, 2402 ಮತ್ತು 2515ರಡಿ ಒಟ್ಟು ರೂ.262.67ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.55.93ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300 ರಡಿ ರೂ.111.82ಲಕ್ಷ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ150.85ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## <u>ಸರ್ಕಾರದ ಆದೇಶ ಸಂಖ್ಯೆ: ಆಇ 483 ವೆಚ್ಚ 6/2020(ಇ) ದಿನಾಂಕ: 19ನೇ ಡಿಸೆಂಬರ್ 2020</u>

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ/ಸಂಭಾವನೆ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5ರ ಲೆಕ್ಕ ಶೀರ್ಷಿಕೆಯಡಿ ಕಾಲಂ 6ರ ಒಟ್ಟು ರೂ262.67ಲಕ್ಷ (ರೂಪಾಯಿ ಎರಡು ನೂರ ಅರವತ್ತೆರಡು ಲಕ್ಷದ ಅರವತ್ತೇಳು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

<u>(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)</u>

| ಕ್ರಮ ಸಂಖ್ಯೆ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು (ರೂ. ಲಕ್ಷಗಳಲ್ಲಿ) |
|---|---|---|---|---|---|
| 1 | 2 | 3 | 4 | 5 | 6 |
| 1 | ಯಾದಗಿರಿ | 2515-00-101-0-28-090 | 89.02 | | 89.02 |
| 2 | ಚಾಮರಾಜನಗರ | 2435-00-101-0-26-005 | 22.07 | | 22.07 |
| 3 | ಹಾವೇರಿ | 2402-00-104-0-26-005 | 0.73 | 1415504049 | 0.73 |
| 4 | ಕೂಡ್ಲಿಗಿ | 2210-00-104-0-61-034 | 1415504162 19.12.20 | 13.36 | 13.36 |
| 5 | ಸವಣೂರು | 2435-00-101-0-61-005 | | 24.74 | 24.74 |
| 6 | ಚಿಕ್ಕೋಡಿ | 2515-00-102-0-61-005 | | 95.56 | 95.56 |
| 7 | ಹುಣಸೂರು | 2225-00-102-0-69-005 | | 4.19 | 4.19 |
| 8 | ಬೇಲೂರು | 2515-00-102-0-61-090 | | 13.00 | 13.00 |
| | **ಒಟ್ಟು** | | **111.82** | **150.85** | **262.72** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು. ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಅಪ/ಸಮಾಜ ಕಲ್ಯಾಣ/ಶಿಕ್ಷಣ/ತೋಟಗಾರಿಕೆ/ಜಲಾನಯನ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು 8.ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ